# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : 356+357+294+409+277 |
| ಸದಸ್ಯರ ಹೆಸರು | ಶ್ರೀ ಎಸ್.ವ್ವಿ.ಸಂಕನೂರ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು), ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು), ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) ಹಾಗೂ ಶ್ರೀ ಪ್ರತಾಪ್ ಸಿಂಹ್ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 18-07-2024 |
| ಉತ್ತರಿಸಬೇಕಾದ ಸಚಿವರು | : ಮುಖ್ಯ ಮಂತ್ರಿ |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರಿ ನೌಕರರಿಗೆ 7ನೇ ಪರಿಷ್ಕೃತ ವೇತನ ಶ್ರೇಣಿಗಳನ್ನು ನೀಡುವ ಕುರಿತು ಸರ್ಕಾರ ಯಾವ ದಿನಾಂಕ / ವರ್ಷದಂದು ವೇತನ ಆಯೋಗವನ್ನು ರಚನೆ ಮಾಡಿದೆ ಮತ್ತು ವರದಿಯನ್ನು ಸಲ್ಲಿಸಲು ನಿಗದಿಪಡಿಸಿದ ಅವಧಿ ಎಷ್ಟು; (ಮಾಹಿತಿ ನೀಡುವುದು) | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆಯ ಕುರಿತಂತೆ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಿ 06 ತಿಂಗಳೊಳಗೆ ರಾಜ್ಯ ಸರ್ಕಾರಕ್ಕೆ ಸೂಕ್ತ ವರದಿಯನ್ನು ಸಲ್ಲಿಸಲು ದಿನಾಂಕ:19-11-2022ರ ಸರ್ಕಾರಿ ಆದೇಶ ಸಂಖ್ಯೆ:ಆಇ 45 ಎಸ್.ಆರ್.ಪಿ 2022ರಲ್ಲಿ ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶ ಹೊರಡಿಸಲಾಗಿರುತ್ತದೆ. ನಂತರ ದಿನಾಂಕ:06-11-2023ರ ಆದೇಶದಲ್ಲಿ ಆಯೋಗದ ಕಾಲಾವಧಿಯನ್ನು ದಿನಾಂಕ: 15-03-2024ರವರೆಗೆ ವಿಸ್ತರಿಸಿ ಆದೇಶಿಸಲಾಗಿರುತ್ತದೆ. |
| ಆ) | ರಾಜ್ಯ ಸರ್ಕಾರಿ ನೌಕರರ ಸಂಘ ಏಳನೇ ವೇತನ ಆಯೋಗದ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸಲು ಮತ್ತು ಇನ್ನುಳಿದ ಎರಡು ಬೇಡಿಕೆಗಳನ್ನು ಇದೇ ಜುಲೈ ಕೊನೆಯ ವಾರದ ಒಳಗಾಗಿ ಈಡೇರಿಸದಿದ್ದಲ್ಲಿ ಆಗಸ್ಟ್ ತಿಂಗಳಿನಿಂದ ಕೆಲಸಕ್ಕೆ ಗೈರು ಹಾಜರಾಗುವ ಮೂಲಕ ಅಸಹಕಾರಿ ಚಳುವಳಿ ಆರಂಭಿಸುವ ಬಗ್ಗೆ ನಿರ್ಣಯ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು<br>ರಾಜ್ಯ ಸರ್ಕಾರಿ ನೌಕರರ ವೇತನ ಭತ್ಯೆಗಳು ಮತ್ತು ಪಿಂಚಣಿ ಪರಿಷ್ಕರಣೆ ಕುರಿತಂತೆ, 7ನೇ ರಾಜ್ಯ ವೇತನ ಆಯೋಗವು ಸಲ್ಲಿಸಿರುವ ವರದಿಯಲ್ಲಿನ ಶಿಫಾರಸ್ಸಿನಂತೆ ರಾಜ್ಯ ಸರ್ಕಾರಿ ನೌಕರರ ವೇತನ, ವೇತನ ಸಂಬಂಧಿತ ಭತ್ಯೆಗಳು ಮತ್ತು ಪಿಂಚಣಿಯನ್ನು ದಿನಾಂಕ:01-07-2022ರಿಂದ ಅನ್ವಯವಾಗುವಂತೆ ಪರಿಷ್ಕರಿಸಿ ದಿನಾಂಕ :01-08-2024ರಿಂದ |

| | | |
|---|---|---|
| ಇ) | ಏಳನೇ ವೇತನ ಆಯೋಗದ ಶಿಫಾರಸ್ಸು ಜಾರಿ ಮಾಡಲು ಮತ್ತು ಇನ್ನುಳಿದ ಎರಡು ಬೇಡಿಕೆಗಳಾದ ಎನ್.ಪಿ.ಎಸ್ ರದ್ದು ಪಡಿಸಿ ಓ.ಪಿ.ಎಸ್ ಜಾರಿ ಹಾಗೂ ನೌಕರರ ಕುಟುಂಬಕ್ಕೆ ಉಚಿತ ಆರೋಗ್ಯ ಯೋಜನೆ ಅನುಷ್ಠಾನಗೊಳಿಸಲು ಸರ್ಕಾರ ಯಾವ ರೀತಿಯ ನಿರ್ಧಾರ ಕೈಗೊಂಡಿದೆ; (ವಿವರವಾದ ಮಾಹಿತಿ ನೀಡುವುದು) | ಅನುಷ್ಠಾನಗೊಳಿಸಲು ದಿನಾಂಕ:15-07-2024ರ ಸಚಿವ ಸಂಪುಟದ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.<br><br>ರಾಜ್ಯ ಸರ್ಕಾರಿ ನೌಕರರ ಬೇಡಿಕೆಯಂತೆ; ಈಗಾಗಲೇ, ಹಳೆಯ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ, ಈ ಯೋಜನೆಯ ಅನುಷ್ಠಾನದ ಬಗ್ಗೆ ಅಧ್ಯಯನ ನಡೆಸಿ ವರದಿಯನ್ನು ಸಲ್ಲಿಸಲು ಸಮಿತಿಯನ್ನು ರಚಿಸಿ ದಿನಾಂಕ:01.03.2023ರಂದು ಆದೇಶಿಸಲಾಗಿರುತ್ತದೆ. ಸರ್ಕಾರವು ಸಮಿತಿಯ ವರದಿಯ ನಿರೀಕ್ಷೆಯಲ್ಲಿರುತ್ತದೆ.<br><br>ಮುಂದುವರೆದು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರು ಮತ್ತು ಅವಲಂಭಿತ ಕುಟುಂಬದ ಸದಸ್ಯರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆಯನ್ನು ಒದಗಿಸಲು 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ'ಯನ್ನು ಅನುಷ್ಠಾನಗೊಳಿಸಲು ಈಗಾಗಲೇ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ರಾಜ್ಯ ಸರ್ಕಾರದ ಆರೋಗ್ಯ ಯೋಜನೆಯು ಅನುಷ್ಠಾನದ ಹಂತದಲ್ಲಿದ್ದು, ವಿವಿಧ ಆಸ್ಪತ್ರೆಗಳೊಂದಿಗಿನ ಒಡಂಬಡಿಕೆ(MoU) ಕಾರ್ಯಗಳು ಹಾಗೂ ದತ್ತಾಂಶ ಕ್ರೋಢೀಕರಣ ಮತ್ತು ನಿರ್ವಹಣೆಯ ತಂತ್ರಾಂಶ ಅಭಿವೃದ್ಧಿ ಕಾರ್ಯಗಳು ಪ್ರಗತಿಯಲ್ಲಿರುತ್ತವೆ. |
| ಈ) | ಸರ್ಕಾರಕ್ಕೆ ವರದಿ ಸಲ್ಲಿಸುವ ಹಂತದಲ್ಲಿರುವ ಆಯೋಗದ ಅವಧಿಯನ್ನು ಎಷ್ಟು ಬಾರಿ ಮುಂದೂಡಲಾಗಿದೆ; ಇದಕ್ಕೆ ಬೇಕಾಗುವ ಹಣ ಎಷ್ಟು; ವೇತನ ಆಯೋಗದ ವರದಿಯನ್ನು ಯಾವಾಗ ಜಾರಿಗೊಳಿಸಲಾಗುವುದು; ಯಾವ ದಿನಾಂಕದಿಂದ ನೌಕರರಿಗೆ ಆರ್ಥಿಕ ಸೌಲಭ್ಯ ಕಲ್ಪಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ಮೇಲಿನ 'ಆ' ಉತ್ತರದಿಂದ ಉದ್ಭವಿಸುವುದಿಲ್ಲ |

ಸಂ: ಆಇ 26 ಎಸ್‌ಆರ್‌ಪಿ 2024

(ಸಿದ್ದರಾಮಯ್ಯ)

ಮುಖ್ಯಮಂತ್ರಿ